ಡಾ. ಬಾಬಾ ಸಾಹೇಬ್ ಅಂಬೇಡ್ಕರ್‌ರವರ ಮೂಲ ಇಂಗ್ಲೀಷ್ ಕೃತಿಗಳನ್ನು ಕನ್ನಡಕ್ಕೆ ತರ್ಜುಮೆ ಮಾಡಲು ಸರ್ಕಾರ ಸಮಿತಿಯೊಂದನ್ನು ರಚಿಸಿದ ಬಗ್ಗೆ

ವಿಲಿಜ (ಟ್ರಿಪ್) ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ).—ಮಾನ್ಯ ಶಿಕ್ಷಣ ಯುವಜನ ಸೇವಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ–

ಅ) ಡಾ: ಬಾಬಾ ಸಾಹೇಬ್ ಅಂಬೇಡ್ಕರ್‌ರವರ ಮೂಲ ಇಂಗ್ಲೀಷ್ ಕೃತಿಗಳನ್ನು ಕನ್ನಡಕ್ಕೆ ತರ್ಜುಮೆ ಮಾಡಲು ಸರ್ಕಾರ ಸಮಿತಿಯೊಂದನ್ನು ರಚಿಸಿದೆಯೇ ;

ಆ) ಹಾಗಿದ್ದಲ್ಲಿ ಸದರಿ ಸಮಿತಿಯು ಕಾರ್ಯ ನಿರ್ವಹಿಸುತ್ತಿದೆಯೇ?

ಶ್ರೀ ಕೆ.ಹೆಚ್. ರಂಗನಾಥ್ (ಶಿಕ್ಷಣ, ಯುವಜನ ಸೇವಾ ಹಾಗೂ ಶಿಕ್ಷಣ, ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು).—

ಅ) ಹೌದು.

ಆ) ಹೌದು.

ರಾಜ್ಯದಲ್ಲಿರುವ ಖಾಸಗಿ ಆಡಳಿತ ಮಂಡಳಿಯವರಿಂ ಅನಧಿಕೃತವಾಗಿ ನಡೆಸುತ್ತಿರುವ ಪ್ರಾಥಮಿಕ ಶಾಲೆಗಳನ್ನು ಮುಚ್ಚಲು ತೀರ್ಮಾನ ತೆಗೆದುಕೊಂಡ ಬಗ್ಗೆ

ವಿಲಿಜ (ಆರ್‌ಐ) ಶ್ರೀ ಕೆ. ಲಕ್ಕಪ್ಪ (ಕುಣಿಗಲ್).—ಮಾನ್ಯ ಶಿಕ್ಷಣ, ಯುವಜನ ಸೇವೆ, ಹಾಗು ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ)–

ಅ) ರಾಜ್ಯದಲ್ಲಿರುವ ಖಾಸಗಿ ಆಡಳಿತ ಮಂಡಳಿಯವರು ಅನಧಿಕೃತವಾಗಿ ನಡೆಸುತ್ತಿರುವ ಪ್ರಾಥಮಿಕ ಶಾಲೆಗಳನ್ನು ಮುಚ್ಚಲು ಸರ್ಕಾರವು ಯಾವ ತೀರ್ಮಾನವನ್ನು ತೆಗೆದುಕೊಂಡಿದೆ ;

ಆ) ಹಾಗಿದ್ದಲ್ಲಿ, ಅಂತಹ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಹಾಗೂ ಹೆಸರುಗಳು ?

ಶ್ರೀ ಕೆ. ಹೆಚ್. ರಂಗನಾಥ್ (ಶಿಕ್ಷಣ, ಯುವಜನಸೇವೆ, ಹಾಗೂ ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು).—

ಅ) ಇಲ್ಲ, ಆದರೆ ಸಾರ್ವಜನಿಕರಿಗೆ ಪತ್ರಪತ್ರಿಕೆಗಳ ಮುಖಾಂತರ ತಮ್ಮ ಮಕ್ಕಳನ್ನು ಇಂಥ ಅನಧಿಕೃತ ಶಾಲೆಗಳಿಗೆ ಸೇರಿಸಬಾರದೆಂದು ಎಚ್ಚರಿಸಲಾಗುತ್ತಿದೆ.

ಆ) ಉದ್ಭವಿಸುವುದಿಲ್ಲ.

ಸಾಹಿತಿಗಳು, ಕಲಾವಿದರು, ಸಮಾಜ ಸೇವಕರು ಮುಂತಾದವರಿಗೆ ರಾಜ್ಯ ಸರ್ಕಾರದಿಂದ ಗೌರವ ಧನ ನೀಡುವ ಬಗ್ಗೆ.

ಖ್ಯಂ ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಚಿಕ್ಕಪೇಟೆ).—ಮಾನ್ಯ ಶಿಕ್ಷಣ, ಯುವಜನ ಸೇವಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳುಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ.—

ಅ) ರಾಜ್ಯದ ಕಲಾವಿದರು ವಿದ್ವಾಂಸರು ಪಂಡಿತರು ಸಮಾಜ ಸೇವಕರು ರೂ. ೨೫೦ ೫೦೦ ರೂ.ಗಳ ಗೌರವಧನ ಮಂಜೂರಾತಿ ಪಡೆದಿರುವ ಕಲಾವಿದರುಗಳ ಹೆಸರೇನು ;

ಆ) ಗೌರವಧನ ಮಂಜೂರಾತಿಯಿಂದ ವರ್ಷಕ್ಕೆ ತಗಲುವ ವೆಚ್ಚವೆಷ್ಟು ;

ಇ) ಆಯಾ ಕ್ಷೇತ್ರದಲ್ಲಿ ಕೆಲಸ ಮಾಡದೆ ಇರುವವರು ಮತ್ತು ಆರ್ಥಿಕವಾಗಿ ಸುಸ್ಥಿತಿಯಲ್ಲಿರುವವರಿಗೂ ಈ ರೀತಿಯ ಗೌರವಧನವನ್ನು ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಈ) ಹಾಗಿದ್ದಲ್ಲಿ ಇಂತಹ ಗೌರವಧನ ಪಡೆಯುವವರ ಪಟ್ಟಿಯನ್ನು ಪರಿಶೀಲಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದೇ ?